ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 1518/2021**

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ **1.** ಗುರುಮೂರ್ತಿ
ತಂದೆ - ಪುಟ್ಟಸ್ವಾಮಿಬೋವಿ
ಸುಮಾರು **35** ವರ್ಷ ವಯಸ್ಸು,

ಎ **2.** ಪುಟ್ಟಸ್ವಾಮಿಬೋವಿ
ತಂದೆ - ಪುಟ್ಟಬೋವಿ
ಸುಮಾರು **65** ವರ್ಷ ವಯಸ್ಸು,

ಎ **3.** ರೇವಣ್ಣ
ತಂದೆ - ಪುಟ್ಟಸ್ವಾಮಿಬೋವಿ
ಸುಮಾರು **36** ವರ್ಷ ವಯಸ್ಸು,

ಎಲ್ಲರ ವಾಸ: ಕೆಬ್ಬೆಕೊಪ್ಪಲು ಗ್ರಾಮ
ಹುಣಸೂರು ತಾಲ್ಲೂಕು
ಮೈಸೂರು ಜಿಲ್ಲೆ.

# ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:

1. ದಿನಾಂಕ *02.05.2021* ರಂದು ಬೆಳಿಗ್ಗೆ 11.*00* ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದು ಸುಬಾಬುಲ್ಲ ಮರದಲ್ಲಿ ಸಾಕ್ಷಿ 1 ರವರು ಮೇಕೆಗೆಂದು ಸೊಪ್ಪನ್ನು ಕತ್ತರಿಸುವಾಗ 1ನೇ ಆರೋಪಿಯಾದ ನೀವು ಸೊಪ್ಪನ್ನು ಯಾಕೆ ಕೀಳುತ್ತಿರುವಿರ ಎಂದು ಈ ಜಾಗ

ನಮ್ಮದೆಂದು ಜಗಳ ತೆಗೆದು ಬೋಳಿ ಮಗನೇ, ಸೂಳೆ ಮಗನೇ ಎಂದು ಸಾಕ್ಷಿ 1 ಅವರಿಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, ಸಾಕ್ಷಿ1 ಅವರನ್ನು ತಬ್ಬಿ ಹಿಡಿದುಕೊಂಡು ಅವರನ್ನು ಮುಂದೆ ಹೋಗದಂತೆ ಅವರಿಗೆ ಅಕ್ರಮ ತಡೆಯನ್ನುಂಟು ಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, ಸಾಕ್ಷಿ1 ಅವರಿಗೆ ಕೈಯಿಂದ ಮೈಕೈಗೆ ಹೊಡೆದು ನೆಲಕ್ಕೆ ಕೆಡವಿಕೊಂಡು ಕಾಲಿನಿಂದ ತುಳಿದು ಮೈಕೈಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ರಿಂದ 3 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, ಸಾಕ್ಷಿ 1 ಅವರಿಗೆ ನಿನ್ನನ್ನು ಕೊಲೆ ಮಾಡಿ ಜಯಿಸುತ್ತೇವೆಂದು ಕೊಲೆ ಬೆದರಿಕೆ ಹಾಕಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

**(**ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.**)**

**(ಪೂಜಾ ಬೆಳಕೇರಿ)**

ದಿನಾಂಕ: ***26.06.2024***

ಹೆಚ್ಚುವರಿ ದಿವಾಣಿ ನ್ಯಾಯಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 1518/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ 3. ರೇವಣ್ಣ
ತಂದೆ - ಪುಟ್ಟಸ್ವಾಮಿಬೋವಿ
ಸುಮಾರು 36 ವರ್ಷ ವಯಸ್ಸು,

ಭಾರತೀಯ ದಂಡ ಸಂಹಿತೆ ಕಲಂ 240(2) ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)

ದಿನಾಂಕಃ 26.06.2024

ಹೆಚ್ಚುವರಿ ದಿವಾಣಿ ನ್ಯಾಯಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.